ಕರ್ನಾಟಕ ಸರ್ಕಾರ

ಸಂಖ್ಯೆ:ಕರಾವಿಯೋ&ಅಸ/71/ಉಪಾ/2021-22

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:02-09-2021

## ಜಂಟಿ ಸುತ್ತೋಲೆ

ವಿಷಯ: ಗ್ರಾಮ ಪಂಚಾಯಿತಿ ವತಿಯಿಂದ ಶಾಲೆಗಳನ್ನು ಬಲಪಡಿಸುವ ಬಗ್ಗೆ.

ಉಲ್ಲೇಖ

1. ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 06.02.2021 ರಂದು ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ನಡೆದ ಸಭೆಯ ನಡವಳಿ.
2. ಸರ್ಕಾರ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 05 ಮತ್ತು 06 ಏಪ್ರಿಲ್-2021 ರಂದು ನಡೆದ ಕಾರ್ಯಗಾರದ ನಡವಳಿ.
3. ದಿನಾಂಕ:07-04-2021 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ.
4. ದಿನಾಂಕ:14-06-2021 ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಶಿವಮೊಗ್ಗದಲ್ಲಿ ನಡೆದ ಸಭೆಯ ನಡವಳಿ.
5. ದಿನಾಂಕ:02 ಮತ್ತು 03 ಜುಲೈ-2021 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಎ.ಎನ್.ಎಸ್.ಎಸ್.ಐ.ಆರ್.ಡಿ ಮತ್ತು ಪಿ.ಆರ್ ಮೈಸೂರುನಲ್ಲಿ ನಡೆದ ಕಾರ್ಯಾಗಾರದ ನಡವಳಿ.
6. ದಿನಾಂಕ:15-07-2021 ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ.
7. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 265 ಗ್ರಾಪಂಅ 2021 ದಿನಾಂಕ: 27-07-2021

* * * * *

www.ksge.in

ಶಿಕ್ಷಣವು ದೇಶದ ಸರ್ವತೋಮುಖ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ಹೊಂದಿದೆ. ದೇಶದ ಪ್ರತಿಯೊಂದು ಮಗುವು ಶಿಕ್ಷಣದಿಂದ ವಂಚಿತರಾಗದೆ ಗುಣಮಟ್ಟದ ಶಿಕ್ಷಣ ಪಡೆಯಬೇಕೆಂಬುದು ಸರ್ಕಾರದ ಆಶಯವಾಗಿದೆ. ಈ ನಿಟ್ಟಿನಲ್ಲಿ ಅನೇಕ ಯೋಜನೆಗಳನ್ನು ರೂಪಿಸಲಾಗಿದ್ದು, ಹೊಸ ಶಿಕ್ಷಣ ನೀತಿಯನ್ನು ಜಾರಿಗೊಳಿಸಲಾಗಿದೆ. 6-14 ವರ್ಷದ ಎಲ್ಲಾ ಮಕ್ಕಳಿಗೂ ಉಚಿತ ಮತ್ತು ಕಡ್ಡಾಯ ಹಾಗೂ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಮಕ್ಕಳ ಶಿಕ್ಷಣ ಹಕ್ಕುಗಳ ಕಾಯ್ದೆ 2009 ಅನ್ನು ಜಾರಿಗೆ ತರಲಾಗಿದೆ. ಗ್ರಾಮೀಣ ಪ್ರದೇಶದ ಎಲ್ಲಾ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ನೀಡಲು ಸರ್ಕಾರವು ಶ್ರಮಿಸುತ್ತಿದ್ದು, ಗ್ರಾಮೀಣ ಪ್ರದೇಶದ ಎಲ್ಲಾ ಮಕ್ಕಳಿಗೂ ಸುಲಭವಾಗಿ ಶಿಕ್ಷಣ ದೊರೆಯುವಂತಾಗಲು ಗ್ರಾಮಾಂತರ ಪ್ರದೇಶಗಳಲ್ಲಿ ಶಾಲೆಗಳನ್ನು ನಡೆಸಲಾಗುತ್ತಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 58 ರಲ್ಲಿ ಉಲ್ಲೇಖಿಸಿರುವ ಗ್ರಾಮ ಪಂಚಾಯಿತಿಗಳ ಪ್ರಕಾರ್ಯಗಳಲ್ಲಿ ಶಾಲೆಗಳ ಅಭಿವೃದ್ಧಿಯೂ ಸೇರಿದೆ.

ಮಕ್ಕಳ ಶಿಕ್ಷಣ ಹಕ್ಕುಗಳ ಕಾಯ್ದೆ 2009ರಲ್ಲಿ ಕೂಡ ಸ್ಥಳೀಯ ಸರ್ಕಾರದ ಜವಾಬ್ದಾರಿಯನ್ನು ಉಲ್ಲೇಖಿಸಲಾಗಿರುತ್ತದೆ. ಶಾಲೆಗಳಿಗೆ ಬೇಕಾಗುವ ಮೂಲಸೌಕರ್ಯಗಳಾದ ನಿವೇಶನ, ಕಟ್ಟಡ/ದಾಸ್ತಾನು ಕೊಠಡಿ/ಅಡುಗೆ ಕೋಣೆ, ಕಟ್ಟಡ ದುರಸ್ತಿ, ಕಾಂಪೌಂಡ್ ನಿರ್ಮಾಣ, ವಿದ್ಯುತ್ ಸಂಪರ್ಕ, ವಿದ್ಯುತ್ ಬಿಲ್ಲು ಪಾವತಿ, ಕುಡಿಯುವ ನೀರು ಸರಬರಾಜು, ವಾಟರ್ ಫಿಲ್ಟರ್, ಶೌಚಾಲಯ ನಿರ್ಮಾಣ, ಕೈತೋಟ, ಆಟದ ಸಲಕರಣೆ, ಕುರ್ಚಿ, ಬೆಂಚುಗಳು, ಟೇಬಲ್‌ಗಳು, ಗೋಡೆ ಬರಹ ಮುಂತಾದ ನೆರವುಗಳನ್ನು ಒದಗಿಸಬಹುದಾಗಿದೆ. ಗ್ರಾಮ ಪಂಚಾಯಿತಿಗಳು ಈ ಉದ್ದೇಶಕ್ಕಾಗಿ ತಮ್ಮ ಸ್ವಂತ ಸಂಪನ್ಮೂಲ ಆದಾಯ, ಕೇಂದ್ರ ಸರ್ಕಾರದ 15ನೇ ಹಣಕಾಸು ಆಯೋಗದ ಅನುದಾನ, ರಾಜ್ಯ ಸರ್ಕಾರದ ಶಾಸನಬದ್ಧ ಅನುದಾನ, ಜಲಜೀವನ್ ಮಿಷನ್, ಮನರೇಗಾ ಮತ್ತು ಇತರೆ ಯೋಜನೆಗಳ ಅನುದಾನವನ್ನು ಬಳಸಿಕೊಳ್ಳಬಹುದಾಗಿದೆ.

ಈ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿಗಳು ತಮ್ಮ ವ್ಯಾಪ್ತಿಯಲ್ಲಿನ ಶಾಲೆಗಳ ಸ್ಥಿತಿಗತಿಗಳನ್ನು ಅಧ್ಯಯನ ಮಾಡಿ ಕುಂದುಕೊರತೆಗಳನ್ನು ನಿವಾರಿಸಬೇಕಾಗಿದೆ. ಈ ಬಗ್ಗೆ ಉಲ್ಲೇಖ (1) ರ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ವಿವರವಾಗಿ ಚರ್ಚಿಸಲಾಗಿರುತ್ತದೆ, ಉಲ್ಲೇಖ (2), (3), (4), (5) ಹಾಗೂ (6) ರ ಸಭೆಗಳಲ್ಲಿ ಸಹ ವಿಸ್ತೃತವಾಗಿ ಚರ್ಚಿಸಲಾಗಿದೆ. ಈ ಉದ್ದೇಶಕ್ಕಾಗಿ ಗ್ರಾಮ ಪಂಚಾಯಿತಿಗಳು ಆಶ್ರಮ ಶಾಲೆ/ವಸತಿ ಶಾಲೆ/ವಿದ್ಯಾರ್ಥಿ ನಿಲಯಗಳ ಅಧ್ಯಯನಕ್ಕೆ ಭೇಟಿ ನೀಡಲು ಅನುಕೂಲವಾಗುವಂತೆ ಸರ್ಕಾರದ ವತಿಯಿಂದ ಉಲ್ಲೇಖ (7) ರಂತೆ ಭೇಟಿ ಸಂದರ್ಭದಲ್ಲಿ ಮಾಹಿತಿಯನ್ನು ಸಂಗ್ರಹಿಸುವ ಸಲುವಾಗಿ ನಮೂನೆಗಳನ್ನು ಒಳಗೊಂಡಂತೆ ಸುತ್ತೋಲೆಯನ್ನು ಹೊರಡಿಸಲಾಗಿದೆ. ಈ ನಮೂನೆಗಳು ಶಾಲೆಗಳನ್ನು ಅಧ್ಯಯನ ಮಾಡಲು ಮಾರ್ಗದರ್ಶಿಯಾಗಿರುತ್ತವೆ ಹೊರತು ಅಂತಿಮವಾಗಿರುವುದಿಲ್ಲ. ಸ್ಥಳೀಯ ಸನ್ನಿವೇಶಕ್ಕನುಗುಣವಾಗಿ ಇನ್ನೂ ಹೆಚ್ಚಿನ ವಿಷಯಗಳನ್ನು ತಿಳಿದು ಶಾಲೆಗಳಿಗೆ ಅನುಕೂಲ ಕಲ್ಪಿಸಬಹುದಾಗಿದೆ.

ಗ್ರಾಮ ಪಂಚಾಯಿತಿ ವತಿಯಿಂದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಯ ಅಧ್ಯಕ್ಷರು ಹಾಗೂ ಶಿಕ್ಷಣ ಕಾರ್ಯಪಡೆ ಸದಸ್ಯರು ಕನಿಷ್ಠ ಮೂರು ತಿಂಗಳಿಗೊಮ್ಮೆ ತಮ್ಮ ವ್ಯಾಪ್ತಿಯ ಶಾಲೆಗಳಿಗೆ ಭೇಟಿ ನೀಡಿ ಶಿಕ್ಷಕರು/ಸಿಬ್ಬಂದಿ, ಮಕ್ಕಳೊಡನೆ ಹಾಗೂ ಈ ಉದ್ದೇಶಕ್ಕಾಗಿ ರಚಿಸಲಾಗಿರುವ ಶಾಲಾ ಅಭಿವೃದ್ಧಿ ಮತ್ತು ಉಸ್ತುವಾರಿ ಸಮಿತಿಯ ಸದಸ್ಯರೊಂದಿಗೂ ಸಮಾಲೋಚಿಸಿ ಅಲ್ಲಿನ ಸ್ಥಿತಿಗತಿಗಳನ್ನು ಅಧ್ಯಯಿಸಿ ಶಾಲೆಗಳ ಬಲವರ್ಧನೆಗೆ ಬಗ್ಗೆ ತಿಳಿದುಕೊಂಡು ಅವುಗಳನ್ನು ನಿವಾರಿಸಲು ಸಕಾರಾತ್ಮಕ ಕ್ರಮಗಳನ್ನು ಕೈಗೊಳ್ಳಬೇಕೆಂಬುದು ಸರ್ಕಾರದ ಆಶಯವಾಗಿದೆ.

ಈ ಬಗ್ಗೆ ಗ್ರಾಮ ಪಂಚಾಯಿತಿ ಸಭೆಗಳಲ್ಲಿ ತ್ರೈಮಾಸಿಕವಾಗಿ ನಡೆಯುವ ಕೆ.ಡಿ.ಪಿ. ಸಭೆಗಳಲ್ಲಿಯೂ ಶಿಕ್ಷಣ ಇಲಾಖೆಯ ಸಿಬ್ಬಂದಿ ಭಾಗವಹಿಸಿ ಸಭೆಯಲ್ಲಿ ಚರ್ಚಿಸುವುದರ ಮೂಲಕ ಗ್ರಾಮ ಪಂಚಾಯಿತಿಯಿಂದ ಅಗತ್ಯ ನೆರವು ಪಡೆಯಬಹುದಾಗಿದೆ ಕ್ರಮ ಕೈಗೊಳ್ಳಬಹುದಾಗಿದೆ. ಮಕ್ಕಳು ಶಾಲೆಗಳಿಗೆ ತಪ್ಪದೇ ಸೇರ್ಪಡೆಯಾಗಲು ನಿರಂತರವಾಗಿ ಹಾಜರಾಗಲು ಹಾಗೂ ಅಲ್ಲಿನ ಸೌಲಭ್ಯಗಳನ್ನು ಪಡೆದುಕೊಳ್ಳಲು ಪೋಷಕರನ್ನು ಮನವೊಲಿಸುವ ಕೆಲಸ ಮಾಡಬಹುದಾಗಿದೆ. ಗ್ರಾಮ ಪಂಚಾಯತ್‌ನ ದೂರದೃಷ್ಟಿ ಯೋಜನೆಯಲ್ಲಿಯೂ ಸಹಾ ಮೂಲಸೌಕರ್ಯಗಳ ಅವಶ್ಯಕತೆ ಹಾಗೂ ಸಾಮಾಜಿಕ ಗುರಿಗಳನ್ನು ಅಳವಡಿಸುವುದು. ಗ್ರಾಮ ಪಂಚಾಯಿತಿಯಲ್ಲಿ ಅನುದಾನ ಕೊರತೆಯಾದಲ್ಲಿ ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಕಾರ್ಯಕ್ರಮಗಳಲ್ಲಿಯೂ ಅಳವಡಿಸಿಕೊಳ್ಳಲು ಪ್ರಸ್ತಾವನೆ ಸಲ್ಲಿಸುವುದು.

ಗ್ರಾಮ ಪಂಚಾಯಿತಿಗಳು ಶಾಲೆಗಳಿಗೆ ನೀಡಿದ ಭೇಟಿ ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ವರದಿಯನ್ನು ಪಂಚತಂತ್ರದಲ್ಲಿ ಅಳವಡಿಸಲು ತಿಳಿಸಲಾಗಿದೆ.

ಆದ್ದರಿಂದ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳು/ ಸಿಬ್ಬಂದಿ ಹಾಗೂ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಅಧಿಕಾರಿಗಳು / ಸಿಬ್ಬಂದಿ, ಪಂಚಾಯತ್ ರಾಜ್ ವ್ಯವಸ್ಥೆಯ ಚುನಾಯಿತ ಪ್ರತಿನಿಧಿಗಳು ಪರಸ್ಪರ ಸಹಕಾರ ಮತ್ತು ಸಮನ್ವಯತೆಯೊಂದಿಗೆ ಶಾಲೆಗಳನ್ನು ಬಲಪಡಿಸುವ ಮೂಲಕ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವುದು.

(ಎಸ್.ಆರ್.ಉಮಾಶಂಕರ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು.
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿಯನ್ನು ಈ ಕೆಳಕಂಡವರಿಗೆ ಮಾಹಿತಿಗಾಗಿ ಕಳುಹಿಸಿದೆ.**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು.
6. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ ರವರ ಆಪ್ತ ಶಾಖೆ, ಬೆಂಗಳೂರು.
7. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
8. ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು.
9. ಎಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ.
10. ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ.
11. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ / ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ಕಛೇರಿ ಪ್ರತಿ.